ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ

ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು, ನೃಪತುಂಗ ರಸ್ತೆ, ಬೆಂಗಳೂರು–560001

ಸಂಖ್ಯೆ : ಸಹನಿಶಾಶಿ.ಆಶಾ/ಕ.ವೈ.ಕು:ಜಾ:ಸು/32544./ಇ.ವಿ:2020 ದಿನಾಂಕ : 12.03.2020

**–: ಸುತ್ತೋಲೆ :–**

ವಿಷಯ : **Novel Coronavirus (COVID-19)** ನ ವೈರಸ್ ಸೋಂಕು ತಡೆಗಟ್ಟುವಿಕೆ ಮತ್ತು ನಿಯಂತ್ರಣಕ್ಕೆ ಕೈಗೊಳ್ಳಬೇಕಾದ ಅಗತ್ಯ ಪೂರ್ವಸಿದ್ಧತಾ ಕ್ರಮಗಳ ಕುರಿತು.

ಉಲ್ಲೇಖ : 1) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಕರ್ನಾಟಕ ಸರ್ಕಾರ ಇವರ ಸಲಹೆ ಪತ್ರ ಸಂಖ್ಯೆ : **DD/SSU/Novel Coronavirus/17/2019-20**, ದಿನಾಂಕ : 18.02.2020.

2) ಜಂಟಿ ಕಾರ್ಯದರ್ಶಿಗಳು, ಮಾನವ ಸಂಪನ್ಮೂಲ ಅಭಿವೃದ್ಧಿ ಮಂತ್ರಾಲಯ, ನವದೆಹಲಿ, ಇವರ ಪತ್ರ ಸಂಖ್ಯೆ : **14-6/2020-IS-10**, ದಿನಾಂಕ : 21.02.2020.

3) ಈ ಕಛೇರಿಯ ಸುತ್ತೋಲೆ ಸಮ ಸಂಖ್ಯೆ ದಿನಾಂಕ : 27.02.2020

4) ದಿನಾಂಕ 09.03.2020 ರಂದು ನಡೆದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಉನ್ನತಾಧಿಕಾರಿಗಳ ಸಭೆ.

5) ಈ ಕಛೇರಿಯ ಸಮ ಸಂಖ್ಯೆ ದಿನಾಂಕ : 09.03.2020 ರ ಎರಡು ಸುತ್ತೋಲೆಗಳು.

– – –

Novel Coronavirus (COVID-19) ಈ ರೋಗಾಣು ಶಾಲಾ ವಿದ್ಯಾರ್ಥಿಗಳಲ್ಲಿ ಪಸರಿಸುವುದನ್ನು ತಡೆಗಟ್ಟುವ ಸಲುವಾಗಿ ತೆಗೆದು ಕೊಳ್ಳಬೇಕಾದ ಕ್ರಮಗಳ ಬಗ್ಗೆ ಈಗಾಗಲೇ ಉಲ್ಲೇಖ (3)ರ ಈ ಕಛೇರಿಯ ಸುತ್ತೋಲೆಯಲ್ಲಿ ಸೂಚನೆಗಳನ್ನು ನೀಡಲಾಗಿದೆ. ಮುಂದುವರೆದು, ಮುನ್ನೆಚ್ಚರಿಕಾ ಕ್ರಮವಾಗಿ ದಿನಾಂಕ : 09.03.2020 ರಿಂದ ಜಾರಿಗೆ ಬರುವಂತೆ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯ ಶಾಲೆಗಳಲ್ಲಿನ ಪೂರ್ವ ಪ್ರಾಥಮಿಕ, ಎಲ್.ಕೆ.ಜಿ ಮತ್ತು ಯು.ಕೆ.ಜಿ ಶಾಲಾ ವಿದ್ಯಾರ್ಥಿಗಳಿಗೆ ಮುಂದಿನ ಆದೇಶದವರೆಗೆ ರಜೆಯನ್ನು ಘೋಷಿಸಲಾಗಿದೆ. ಉಲ್ಲೇಖ (5) ರ ಸುತ್ತೋಲೆಯಲ್ಲಿ 2019–20ನೇ ಸಾಲಿನ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳಲ್ಲಿ 1 ರಿಂದ 5ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೂ ಸಹ ದಿನಾಂಕ : 10.03.2020 ರಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೆ ರಜೆಯನ್ನು ಘೋಷಿಸಲಾಗಿದೆ.

ಮುಂದುವರೆದು, ಮುನ್ನೆಚ್ಚರಿಕಾ ಕ್ರಮವಾಗಿ ಬೆಂಗಳೂರು (ಉತ್ತರ), ಬೆಂಗಳೂರು (ದಕ್ಷಿಣ) ಹಾಗೂ ಬೆಂಗಳೂರು (ಗ್ರಾಮಾಂತರ) ಜಿಲ್ಲೆಗಳ ವ್ಯಾಪ್ತಿಯಲ್ಲಿನ ಶಾಲೆಗಳು ಈ ಕಳಕಂಡಂತೆ ಕ್ರಮ ವಹಿಸುವುದು :

| | |
|---|---|
| ಪೂರ್ವ-ಪ್ರಾಥಮಿಕ, ಎಲ್.ಕೆ.ಜಿ ಹಾಗೂ ಯು.ಕೆ.ಜಿ ವಿದ್ಯಾರ್ಥಿಗಳಿಗೆ | ಬೇಸಿಗೆ ರಜೆಯನ್ನು ಘೋಷಿಸುವುದು. ನಂತರ 2020-21ನೇ ಶೈಕ್ಷಣಿಕ ಸಾಲಿನ ವೇಳಾಪಟ್ಟಿಯಂತೆ ಶಾಲೆಗಳನ್ನು ಪುನರಾರಂಭ ಮಾಡುವುದು. |
| 1 ರಿಂದ 6ನೇ ತರಗತಿಯ ವಿದ್ಯಾರ್ಥಿಗಳಿಗೆ | 1 ರಿಂದ 6ನೇ ತರಗತಿಯ ಎಲ್ಲಾ ವಿದ್ಯಾರ್ಥಿಗಳಿಗೆ 2019-20ನೇ ಶೈಕ್ಷಣಿಕ ಸಾಲಿನಲ್ಲಿ ತಾವು FA1, FA2, FA3, FA4 & SA1ರಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ವಿದ್ಯಾರ್ಥಿಗಳ ಶ್ರೇಣಿಕೃತ ಫಲಿತಾಂಶವನ್ನು ಪ್ರಕಟಿಸಿ ಮುಂದಿನ ತರಗತಿಗಳಿಗೆ ಬಡ್ತಿ (promote) ನೀಡುವುದು ಹಾಗೂ ಈ ಸಾಲಿನ ಬೇಸಿಗೆ ರಜೆಯನ್ನು ಇಂದಿನಿಂದಲೇ ಘೋಷಿಸುವುದು.<br><br>ಬೇಸಿಗೆ ರಜೆಯ ನಂತರ 2020-21ನೇ ಶೈಕ್ಷಣಿಕ ಸಾಲಿನ ವೇಳಾಪಟ್ಟಿಯಂತೆ ಶಾಲೆಗಳನ್ನು ಪುನರಾರಂಭ ಮಾಡುವುದು. |
| 7 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ | ದಿನಾಂಕ : 13.03.2020 ರಿಂದ ಜಾರಿಗೆ ಬರುವಂತೆ ತರಗತಿಗಳನ್ನು ಪರೀಕ್ಷಾ ಪೂರ್ವಸಿದ್ಧತಾ ರಜೆಯ (Study Leave) ಮಾದರಿಯಲ್ಲಿ ಸ್ಥಗಿತಗೊಳಿಸಿ ಪರೀಕ್ಷಾ ದಿನಗಳಂದು ಮಾತ್ರ ಹಾಜರಾಗಲು ಸೂಚಿಸುವುದು. 7 ರಿಂದ 9ನೇ ತರಗತಿಯ ವಿದ್ಯಾರ್ಥಿಗಳಿಗೆ ದಿನಾಂಕ : 23.03.2020ರೊಳಗೆ ಪರೀಕ್ಷೆಯನ್ನು ಕಡ್ಡಾಯವಾಗಿ ಪೂರ್ಣಗೊಳಿಸಿ, ಬೇಸಿಗೆ ರಜೆಯನ್ನು ಘೋಷಿಸುವುದು.<br><br>10ನೇ ತರಗತಿಯ ವಿದ್ಯಾರ್ಥಿಗಳಿಗೆ ಈಗಾಗಲೇ ನಿಗಧಿಯಾಗಿರುವ ವೇಳಾಪಟ್ಟಿಯಂತೆ ಪರೀಕ್ಷೆಯನ್ನು ನಡೆಸುವುದು.<br><br>ಬೇಸಿಗೆ ರಜೆಯ ನಂತರ 2020-21ನೇ ಶೈಕ್ಷಣಿಕ ಸಾಲಿನ ವೇಳಾಪಟ್ಟಿಯಂತೆ ಶಾಲೆಗಳನ್ನು ಪುನರಾರಂಭ ಮಾಡುವುದು. |

ವಿದ್ಯಾರ್ಥಿಗಳು ಸುರಕ್ಷತಾ ಕ್ರಮವಾಗಿ ಮಾಸ್ಕ್ (mask) ಧರಿಸಿ ಪರೀಕ್ಷೆಯನ್ನು ಬರೆಯಲು ಇಚ್ಛಿಸಿದ್ದಲ್ಲಿ, ಅಂತಹ ವಿದ್ಯಾರ್ಥಿಗಳಿಗೆ ಅನುಮತಿಯನ್ನು ನೀಡುವುದು. ಪರೀಕ್ಷೆಗಳ ಸಂದರ್ಭದಲ್ಲಿ ಮಕ್ಕಳ ಸುರಕ್ಷತೆಗೆ ಅಗತ್ಯವಿರುವ ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ಶಾಲಾ ಮುಖ್ಯಸ್ಥರುಗಳಿಗೆ ತಿಳಿಸಿದೆ.

12/3/20

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ :

1) ಉಪನಿರ್ದೇಶಕರು (ಆಡಳಿತ), ಬೆಂಗಳೂರು (ಉತ್ತರ) / ಬೆಂಗಳೂರು (ದಕ್ಷಿಣ) ಹಾಗೂ ಬೆಂಗಳೂರು (ಗ್ರಾಮಾಂತರ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ.
2) ಬೆಂಗಳೂರು ಉತ್ತರ, ದಕ್ಷಿಣ ಮತ್ತು ಗ್ರಾಮಾಂತರ ಜಿಲ್ಲೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರುಗಳಿಗೆ ಅಗತ್ಯ ಕ್ರಮಕ್ಕಾಗಿ (ಜಿಲ್ಲಾ ಉಪನಿರ್ದೇಶಕರ ಮುಖಾಂತರ)
3) ಬೆಂಗಳೂರು ಉತ್ತರ, ದಕ್ಷಿಣ ಮತ್ತು ಗ್ರಾಮಾಂತರ ಜಿಲ್ಲೆಯ ಎಲ್ಲಾ ಸರ್ಕಾರಿ / ಅನುದಾನಿತ ಹಾಗೂ ಅನುದಾನರಹಿತ ಶಾಲೆಗಳ ಮುಖ್ಯೋಪಾಧ್ಯಾಯರುಗಳಿಗೆ ಕಳುಹಿಸುತ್ತಾ ಅತೀ ತುರ್ತು ಕ್ರಮ ಮತ್ತು ಅನುಷ್ಠಾನಕ್ಕಾಗಿ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ)

<u>ಪ್ರತಿಯನ್ನು ಗೌರವಗಳೊಂದಿಗೆ ಮಾಹಿತಿಗಾಗಿ</u>

1) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ.
3) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು.